Akashvani : Bangalore
National Bulletin In Kannada
18.09.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

1. ಕೃತಕ ಬುದ್ಧಿಮತ್ತೆ ಆಧಾರಿತ ತರಬೇತಿ ಕೇಂದ್ರಗಳಾಗಿ ಐಟಿಐಗಳು ಮೇಲ್ದರ್ಜೆಗೆ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್
2. ನವದೆಹಲಿಯಲ್ಲಿಂದು 'ಮಂಥನ್-೨೦೨೫' ರಾಷ್ಟ್ರೀಯ ಸಮ್ಮೇಳನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ
3. ದೆಹಲಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಗೆ ಚುನಾವಣಾ ಆಯೋಗ ಸಿದ್ಧತೆ
4. ಚೀನಾ ಮಾಸ್ಟರ್ ಸೂಪರ್ ಬ್ಯಾಡ್ಮಿಂಟನ್ ; ಮಹಿಳೆಯರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ಗೆ ಭಾರತದ ಪಿ.ವಿ.ಸಿಂಧು ಲಗ್ಗೆ

************

ರಾಜ್ಯಗಳಲ್ಲಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳು ಮತ್ತು ಐಟಿಐಗಳನ್ನು ಕೃತಕ ಬುದ್ಧಿಮತ್ತೆ ಆಧಾರಿತ ತರಬೇತಿ ಕೇಂದ್ರಗಳಾಗಿ ಮೇಲ್ದರ್ಜೆಗೇರಿಸಲು ಅಗತ್ಯವಿರುವ ಸಂಪೂರ್ಣ ಅನುದಾನವನ್ನು ಕೇಂದ್ರ ಸರ್ಕಾರ ಒದಗಿಸಲಿವೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಇಂಡಿಯನ್ ಫೌಂಡೇಷನ್ ಫಾರ್ ಕ್ವಾಲಿಟಿ ಮ್ಯಾನೇಜ್ಮೆಂಟ್‌ನ ವಾರ್ಷಿಕ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ಉದ್ಯಮದ ಬದಲಾಗುತ್ತಿರುವ ಅಗತ್ಯವನ್ನು ಪೂರೈಸಲು ಐಟಿಐಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ ಎಂದರು. ಕೃತಕಬುದ್ಧಿಮತ್ತೆ ಸಂಬಂಧಿತ ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ತರಬೇತಿಗಾಗಿ ಅತ್ಯುನ್ನತ ಸಂಸ್ಥೆಗಳನ್ನು ಸ್ಥಾಪಿಸಲು ಐಐಟಿಯಂತಹ ಕೆಲವು ಉನ್ನತ ಸಂಸ್ಥೆಗಳನ್ನು ಸರ್ಕಾರ ಗುರುತಿಸಿದೆ. ತರಬೇತಿಯು ಕೃಷಿ, ಶಿಕ್ಷಣ, ಆರೋಗ್ಯ ಮತ್ತು ನಗರ ಜೀವನ ಎಂಬ ನಾಲ್ಕು ವಿಭಿನ್ನ ಕ್ಷೇತ್ರಗಳನ್ನು ಕೇಂದ್ರೀಕರಿಸುತ್ತದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

************

ನವದೆಹಲಿಯಲ್ಲಿಂದು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ 'ಮಂಥನ್-೨೦೨೫' ಅನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉದ್ಘಾಟಿಸಲಿದ್ದಾರೆ. ೨೦೪೭ರ ವೇಳೆಗೆ ಆತ್ಮ ನಿರ್ಭರ ಭಾರತಕ್ಕಾಗಿ ಕಾರ್ಯತಂತ್ರದ ಮಾರ್ಗಸೂಚಿ ಅನುಸಾರ ಈ ಸಮ್ಮೇಳನವನ್ನು ರಕ್ಷಣಾ ಭೂ ಆಡಳಿತ ನಿರ್ದೇಶನಾಲಯ ಆಯೋಜಿಸಿದೆ. ರಕ್ಷಣಾ ಭೂ ನಿರ್ವಹಣೆ, ಸುಧಾರಿತ ಡಿಜಿಟಲ್ ಪರಿಕರಗಳು ಮತ್ತು ತಂತ್ರಜ್ಞಾನವನ್ನು ಬಳಸಿಕೊಳ್ಳುವುದು ಹಾಗೂ ಆಡಳಿತ ಮತ್ತು ಸುಸ್ಥಿರತೆಯನ್ನು ಬಲಪಡಿಸುವಲ್ಲಿ ರಕ್ಷಣೆ ಭೂ ಆಡಳಿತ ಇಲಾಖೆಯ ವಿಕಸನಗೊಳ್ಳುತ್ತಿರುವ ಪಾತ್ರದ ಮೇಲೆ ಈ ಸಮ್ಮೇಳನ ಕೇಂದ್ರೀಕರಿಸುತ್ತದೆ.

************

ಆದಾಯ ತೆರಿಗೆ ಕಾಯ್ದೆ ಹಾಗೂ ಸರಕು ಮತ್ತು ಸೇವಾ ತೆರಿಗೆಯಲ್ಲಿ ಗಮನಾರ್ಹ ಸುಧಾರಣೆಗಳನ್ನು ತರಲಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಪಿಎಫ್‌ಐ ವಾರ್ಷಿಕ ವೇದಿಕೆ-೨೦೨೫ಅನ್ನು ಉದ್ದೇಶಿಸಿ ಮತನಾಡಿದ ಸಚಿವರು, ಜಿಎಸ್‌ಟಿ ಸುಧಾರಣೆಯು ದೈನಂದಿನ ಗೃಹೋಪಯೋಗಿ ವಸ್ತುಗಳು ಮತ್ತು ಕೃಷಿ ಉತ್ಪನ್ನಗಳನ್ನು ಹೆಚ್ಚು ಕೈಗೆಟಕುವಂತೆ ಮಾಡುತ್ತದೆ. ಸರಕುಗಳ ಬೆಲೆಗಳು ಬೇಡಿಕೆಗಿಂತ ಕಡಿಮೆಯಾದಾಗ ಅದಕ್ಕೆ ಗಮನಾರ್ಹ ಉತ್ತೇಜನ ಸಿಗುತ್ತದೆ ಎಂದರು. ಭಾರತೀಯ ರೈಲ್ವೆಯು ಸುರಕ್ಷತೆಗೆ ಸಂಬಂಧಿಸಿದ ಯೋಜನೆಗಳಿಗಾಗಿ ಪ್ರತಿವರ್ಷ ಒಂದು ಲಕ್ಷ ೩೦ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಖರ್ಚು ಮಾಡುತ್ತದೆ. ಸರ್ಕಾರದ ನಿರಂತರ ಪ್ರಯತ್ನಗಳಿಂದಾಗಿ ೨೦೦೩-೦೪ರಲ್ಲಿ ೧೭೦ ಇದ್ದ ರೈಲು ಅಪಘಾತಗಳ ಸಂಖ್ಯೆ ಈಗ ೩೧ಕ್ಕೆ ಇಳಿದಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

************

ದೆಹಲಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ೨೦೨೫ ಅನ್ನು ಯಶಸ್ವಿಯಾಗಿ ನಡೆಸಲು ಭಾರತೀಯ ಚುನಾವಣಾ ಆಯೋಗ ಸಿದ್ಧತೆಗಳನ್ನು ಪ್ರಾರಂಭಿಸಿದೆ. ದೆಹಲಿಯ ಮುಖ್ಯ ಚುನಾವಣಾಧಿಕಾರಿಯ ಕಚೇರಿಯು ರಾಷ್ಟ್ರ ರಾಜಧಾನಿಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಭೂತ್ ಮಟ್ಟದ ಅಧಿಕಾರಿಗಳನ್ನು ನೇಮಿಸಿದ್ದು, ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ತರಬೇತಿ

ನೀಡಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ೨೦೦೨ ರಲ್ಲಿ ವಿಶೇಷ ಪರಿಷ್ಕರಣೆಗೊಂಡ ಮತದಾರರ ಪಟ್ಟಿಯನ್ನು ದೆಹಲಿ ಮುಖ್ಯ ಚುನಾವಣಾಧಿಕಾರಿ ಜಾಲತಾಣದಲ್ಲಿ ಪ್ರಕಟಿಸಲಾಗಿದೆ.

************

ವಿಶ್ವಸಂಸ್ಥೆಯಲ್ಲಿ ಪಟ್ಟಿ ಮಾಡಲಾದ ಪಾಕಿಸ್ತಾನ ಮೂಲದ ಲಷ್ಕರ್ ಎ ತಯ್ಯಿಬಾ ಮತ್ತು ಜೈಶ್ ಎ ಮೊಹಮ್ಮದ್ ನಂತಹ ಭಯೋತ್ಪಾದಕ ಸಂಘಟನೆಗಳು ಮತ್ತು ಅವರ ಬೆಂಬಲಿಗರು ಭಯೋತ್ಪಾದನೆಗಾಗಿ ಅಫ್ಘಾನಿಸ್ತಾನದ ಭೂಮಿಯನ್ನು ಬಳಸಲು ಅವಕಾಶ ನೀಡದಂತೆ ಜಾಗತಿಕ ಕ್ರಮ ಕೈಗೊಳ್ಳಬೇಕೆಂದು ಭಾರತ ಕರೆ ನೀಡಿದೆ. ಅಫ್ಘಾನಿಸ್ತಾನದ ಕುರಿತು ನಡೆದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಮಾಹಿತಿ ಸಭೆಯಲ್ಲಿ, ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ರಾಯಭಾರಿ ಪರ್ವತನೇನಿ ಹರೀಶ್ ಮಾತನಾಡಿ, ಅಫ್ಘಾನಿಸ್ತಾನದಲ್ಲಿನ ಭದ್ರತಾ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಹೇಳಿದರು. ಅಫ್ಘಾನಿಸ್ತಾನಕ್ಕೆ ಸಹಾಯ ಮಾಡಲು ಭಾರತ ಯಾವಾಗಲೂ ಅಂತಾರಾಷ್ಟ್ರೀಯ ಮತ್ತು ಪ್ರಾದೇಶಿಕ ಸಹಕಾರವನ್ನು ಬೆಂಬಲಿಸುತ್ತದೆ. ಈ ಗುರಿಯನ್ನು ಸಾಧಿಸಲು ನಡೆಯುವ ಸಭೆಗಳಲ್ಲಿ ಭಾಗವಹಿಸುತ್ತದೆ ಎಂದು ತಿಳಿಸಿದರು.ಏಪ್ರಿಲ್ ೨೨ರ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಅಫ್ಘಾನಿಸ್ತಾನ ತೀವ್ರವಾಗಿ ಖಂಡಿಸಿದ್ದನ್ನು ಭಾರತ ಸ್ವಾಗತಿಸಿತ್ತು.

************

ಸೌದಿ ಅರೇಬಿಯಾ ಮತ್ತು ಪಾಕಿಸ್ತಾನ ನಡುವಿನ ಕಾರ್ಯತಂತ್ರದ ಪರಸ್ಪರ ರಕ್ಷಣಾ ಒಪ್ಪಂದವು ಭಾರತದ ರಾಷ್ಟ್ರೀಯ ಭದ್ರತೆಗೆ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಸ್ಥಿರತೆಗೆ ಯಾವ ಪರಿಣಾಮಗಳನ್ನು ಬೀರುತ್ತವೆ ಎಂಬುದನ್ನು ಅಧ್ಯಯನ ಮಾಡುವುದಾಗಿ ವಿದೇಶಾಂಗ ಸಚಿವಾಲಯ ತಿಳಿಸಿದೆ. ಸೌದಿ ಅರೇಬಿಯಾ ಮತ್ತು ಪಾಕಿಸ್ತಾನ ನಡುವಿನ ಒಪ್ಪಂದದ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತದ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸಲು ಮತ್ತು ಎಲ್ಲಾ ಕ್ಷೇತ್ರಗಳಲ್ಲಿ ಸಮಗ್ರ ರಾಷ್ಟ್ರೀಯ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿವೆ ಎಂದು ಹೇಳಿದರು.

************

ಸೇವೆ ಮತ್ತು ಸುಶ್ಯಾಸನ ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ, ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ.ಇಂದಿನ ಈ ವಿಶೇಷ ಸರಣಿ-ಸೇವಾ ಪರ್ವದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೃಷಿಯಲ್ಲಿ ಪರಿವರ್ತನೆಯನ್ನು ತಂದಿದೆ ಮತ್ತು ರೈತರನ್ನು ಸಬಲೀಕರಣಗೊಳಿಸಿದ ಕುರಿತು ಒಂದು ವಿಶೇಷ ವರದಿ.

*ಕೃಷಿ-ಭಾರತದ ಆರ್ಥಿಕತೆ ಮತ್ತು ಸಂಸ್ಕೃತಿಯ ಬೆನ್ನೆಲುಬಾಗಿದೆ. ಇದು ಲಕ್ಷಾಂತರ ಕುಟುಂಬಗಳನ್ನು ಪೋಷಿಸುತ್ತದೆ. ಭಾರತ ಅಮೃತ ಕಾಲದಲ್ಲಿ ಪ್ರವೇಶಿಸುತ್ತಿದ್ದಂತೆ, ಸಬಲೀಕೃತ ರೈತರು ದೇಶವನ್ನು ಸ್ವಾವಲಂಬನೆಯಿಂದ ಆಹಾರ ಉತ್ಪಾದನೆಯಲ್ಲಿ ನಾಯಕತ್ವಕ್ಕೆ ಕೊಂಡೊಯ್ಯಲು ಸಿದ್ಧರಾಗಿದ್ದಾರೆ. ಕಳೆದ ೧೧ ವರ್ಷಗಳಲ್ಲಿ ಕೃಷಿ ಸಚಿವಾಲಯದ ಬಜೆಟ್ ಸುಮಾರು ೨೨ ಸಾವಿರ ಕೋಟಿ ರೂಪಾಯಿಗಳಿಂದ ಒಂದು ಲಕ್ಷ ೩೭ ಸಾವಿರ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ. ಕೆಂಪುಕೋಟೆಯಿಂದ ರಾಷ್ಟ್ರನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಪ್ರಧಾನಿ ಮೋದಿಯವರು ಈ ವಿಷಯವನ್ನು ಪುನರುಚ್ಚರಿಸಿದ್ದಾರೆ. ರೈತರ ಹಿತಾಸಕ್ತಿಗಳನ್ನು ಖಚಿತಪಡಿಸಿಕೊಳ್ಳಲು ನಿರಂತರವಾಗಿ ಕೆಲಸ ಮಾಡುತ್ತಿರುವ ಕೇಂದ್ರ ಸರ್ಕಾರ, ಕಳೆದ ೧೧ ವರ್ಷಗಳಲ್ಲಿ ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಶೇಕಡ ೮೧ ರಿಂದ ಶೇಕಡ ೨೨೬ಕ್ಕೆ ಏರಿಕೆ ಮಾಡಿದೆ. ರೈತರಿಗೆ ಆರ್ಥಿಕ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯನ್ನು ಪ್ರಾರಂಭಿಸಿದೆ. ಈ ಯೋಜನೆಯಡಿಯಲ್ಲಿ ಕಳೆದ ೬ ವರ್ಷಗಳಲ್ಲಿ ೩ ಲಕ್ಷ ೯೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೊತ್ತವನ್ನು ವಿತರಿಸಲಾಗಿದೆ. ಸಣ್ಣ ಮತ್ತು ಅತಿಸಣ್ಣ ರೈತರಿಗೆ ಪ್ರಧಾನಮಂತ್ರಿ ಕಿಸಾನ್ ಮಾನ್ ಧನ್ ಯೋಜನೆಯು ೩ ಸಾವಿರ ರೂಪಾಯಿಗಳ ಮಾಸಿಕ ಪಿಂಚಣಿಗೆ ಅವಕಾಶವನ್ನು ಕಲ್ಪಿಸಿದೆ. ಸುಮಾರು ೨೫ ಲಕ್ಷ ರೈತರು ಈ ಯೋಜನೆಯಡಿಯಲ್ಲಿ ದಾಖಲಾಗಿದ್ದಾರೆ. ಸಾಲಕ್ಕೆ ಸುಲಭ ಪ್ರವೇಶವನ್ನು ಒದಗಿಸಲು ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಸಾಲದ ಮಿತಿಯನ್ನು ೫ ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ೧೦ ಲಕ್ಷ ಕೋಟಿ ರೂಪಾಯಿಗಳ ಸಾಲ*

*ಒದಗಿಸಲಾಗಿದೆ. ರೈತರು ಮತ್ತು ಆಹಾರ ಭದ್ರತೆಗಾಗಿ ಪ್ರಧಾನ್ ಮಂತ್ರಿ ಫಸಲ್ ಭೀಮಾ ಯೋಜನೆ, ಪ್ರಧಾನ್ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಕೃಷಿ ಮೂಲಸೌಕರ್ಯ ನಿಧಿ, ಪ್ರಧಾನಮಂತ್ರಿ ಕಿಸಾನ್ ಸಮೃದ್ಧಿ ಕೇಂದ್ರಗಳು ಮತ್ತು ರಾಷ್ಟ್ರೀಯ ಕೃಷಿ ಮಾರುಕಟ್ಟೆ ಲಭ್ಯವಿದೆ.*

************

ಚೀನಾದ ಶೆನ್‌ಜನ್‌ನಲ್ಲಿ ಇಂದು ನಡೆದ ಚೀನಾ ಮಾಸ್ಟರ್ ಸೂಪರ್-೭೫೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಪಿ.ವಿ.ಸಿಂಧು, ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಪಿ.ವಿ.ಸಿಂಧು, ಥೈಲ್ಯಾಂಡ್‌ನ ಪೋನ್‌ಪಾವಿ ಚೊಚು ವಾಂಗ್ ಅವರನ್ನು ೨೧-೧೫, ೨೧-೧೫, ಅಂತರದಿಂದ ಸೋಲಿಸಿದರು. ಇದೇ ವೇಳೆ ಪುರುಷರ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿಯು

************

ಏಷ್ಯಾ ಟಿ೨೦ ಕಪ್ ಕ್ರಿಕೆಟ್‌ನಲ್ಲಿ, ಅಫ್ಘಾನಿಸ್ತಾನ ತಂಡ ಇಂದು ಅಬುಧಾಬಿಯಲ್ಲಿ ನಡೆಯಲಿರುವ 'ಬಿ' ಗುಂಪಿನ ಪಂದ್ಯದಲ್ಲಿ ಶ್ರೀಲಂಕಾವನ್ನು ಎದುರಿಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಸೂಪರ್ ಫೋರ್‌ಗೆ ಅರ್ಹತೆ ಪಡೆಯಲು ಅಫ್ಘಾನಿಸ್ತಾನ ತಂಡ ಗೆಲ್ಲಲೇಬೇಕಾದ ಅನಿವಾರ್ಯತೆಯಲ್ಲಿದೆ.

*******END******